ಆ) ನಿಜವಿದ್ದಲ್ಲಿ, ಕ್ರಮ ತೆಗೆದುಕೊಳ್ಳದಿರಲು ಕಾರಣವೇನು?

ಇ) ಕ್ರಮ ತೆಗೆದುಕೊಂಡಿದ್ದಲ್ಲಿ ಯಾವ ಹಂತದಲ್ಲಿದೆ?

ಈ) ಮಂಡ್ಯ ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಕೆಲಸ ಮಾಡುತ್ತಿರುವ ಹಮಾಲಿಗಳಿಗೆ ವಸತಿ ಸೌಕರ್ಯ ನೀಡಲು ಸರ್ಕಾರ ಯೋಚಿಸಿದೆಯೇ;

ಉ) ಇದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು?

ಶ್ರೀ ಪ್ರಕಾಶ್ ಬಾ ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು):

ಅ) ಹೌದು.

ಆ) ನಬಾರ್ಡ್ ನೆರವನ್ನು ನಿರೀಕ್ಷಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಹೌದು.

ಉ) ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರ ಮೂಲಕ ವಿಶೇಷ ಉದ್ಯೋಗ ಗುಂಪಿನ ಯೋಜನೆಯಡಿ ಅನುಮೋದನೆ ನೀಡಲಾಗಿದೆ. ಮನೆಗಳನ್ನು ನಿರ್ಮಿಸುವ ಸಂಬಂಧ ಫಲಾನುಭವಿಗಳಿಗೆ ಹಕ್ಕು ಪತ್ರ ನೀಡುವ ಬಗ್ಗೆ ಮಂಡ್ಯ ಜಿಲ್ಲಾಧಿಕಾರಿಗಳು, ತಹಶೀಲ್ದಾರ್, ಮಂಡ್ಯ ತಾಲ್ಲೂಕು ಇವರಿಗೆ ಸೂಚನೆ ನೀಡಿದ್ದು, ಕ್ರಮ ಜರುಗಿಸಲಾಗುತ್ತಿದೆ.

5617(6539) : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಕಸಬಾ ಹೋಬಳಿಗೆ ಸೇರಿದ ಬಿ. ಗೌಡಗೆರೆ ಗ್ರಾಮದಲ್ಲಿ ತೋಟಗಾರಿಕೆ ಇಲಾಖೆಗೆ ಸೇರಿದ ಯಾವುದಾದರೂ ಸರ್ಕಾರಿ ಜಮೀನು ಇದೆಯೇ;

ಆ) ಇದ್ದಲ್ಲಿ ಅದರ ವಿಸ್ತೀರ್ಣವೆಷ್ಟು; ಸದರಿ ಪ್ರದೇಶವನ್ನು ತೋಟಗಾರಿಕೆ ಇಲಾಖೆಗೆ ಯಾವಾಗ ನೀಡಲಾಗಿದೆ;

ಇ) ಸದರಿ ಪ್ರದೇಶದಲ್ಲಿ ತೋಟಗಾರಿಕೆ ಸಸ್ಯ ಕ್ಷೇತ್ರದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಕೆ. ಶ್ರೀನಿವಾಸಗೌಡ (ತೋಟಗಾರಿಕೆ ಸಚಿವರು):

ಅ) ಇದೆ.

ಆ) ಒಟ್ಟು ವಿಸ್ತೀರ್ಣ 4.05 ಎಕರೆ. ಇದನ್ನು 1999–2000ನೇ ಸಾಲಿನಲ್ಲಿ ಕಂದಾಯ ಇಲಾಖೆಯಿಂದ ತೋಟಗಾರಿಕೆ ಇಲಾಖೆಗೆ ವರ್ಗಾಯಿಸಲಾಗಿದೆ.

ಇ) ಇಲ್ಲ. ಮಳೆಗಾಲದಲ್ಲಿ ಪೂರ್ಣ ಪ್ರದೇಶ ನೀರಿನಿಂದ ಆವೃತವಾಗುವುದರಿಂದ ತೋಟಗಾರಿಕೆಗೆ ಸೂಕ್ತವಾಗಿರುವುದಿಲ್ಲ.

5618(6529) : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸ್ತುತ ವರ್ಷ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಸರಬರಾಜು ಮಾಡಲು ಸರ್ಕಾರ ಉದ್ದೇಶಿಸಿದೆಯೇ;

ಆ) ಇದ್ದಲ್ಲಿ ಎಷ್ಟು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಸರಬರಾಜು ಮಾಡಲು ಮತ್ತು ಯಾವ್ಯಾವ ಬಿತ್ತನೆ ಬೀಜ ಸರಬರಾಜು ಮಾಡಲು ಉದ್ದೇಶಿಸಲಾಗಿದೆ;

ಇ) ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಸರಬರಾಜು ಮಾಡಲು ಪ್ರಸ್ತುತ ವರ್ಷ ಸರ್ಕಾರ ಎಷ್ಟು ಹಣ ಮೀಸಲಿರಿಸಿದೆ?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು):

ಅ) ಹೌದು.

ರಾಜ್ಯದ ಎಲ್ಲಾ ತಾಲ್ಲೂಕಿನ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸಲು ಉದ್ದೇಶಿಸಿದೆ.

ಆ) ಶೇಕಡ 50ರ ರಿಯಾಯಿತಿಗೆ ಪೂರಕವಾಗಿ ಪ್ರತಿ ಬೆಳೆಗೆ ನಿಗದಿಪಡಿಸಿದ ನಿಚ್ಚಳ ರಿಯಾಯಿತಿ ದರದಂತೆ ನೀಡಲಾಗುವುದು. ಈ ಯೋಜನೆಯಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಹೆಸರು, ಉದ್ದು, ಅಲಸಂದೆ, ಸೂರ್ಯಕಾಂತಿ, ನೆಲಗಡಲೆ, ಸೋಯಅವರೆ ಮತ್ತು ಹತ್ತಿ ಸೇರಿದಂತೆ 13 ಬೆಳೆಗಳ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲು ಉದ್ದೇಶಿಸಲಾಗಿದೆ.

ಇ) ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಸರಬರಾಜು ಮಾಡಲು ಪ್ರಸ್ತುತ ವರ್ಷ ಸರ್ಕಾರ ರೂ. 52.34 ಕೋಟಿಗಳಷ್ಟು ಹಣ ಮೀಸಲಿರಿಸಿದೆ.

5619(6531) : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೈಗೊಂಡಿದ್ದ ಅರ್ಹ ಪಡಿತರದಾರರ ಸಮೀಕ್ಷಾ ಕಾರ್ಯ ಪೂರ್ಣಗೊಂಡಿದೆಯೇ;

ಆ) ಹಾಗಿದ್ದಲ್ಲಿ, ರಾಜ್ಯದಲ್ಲಿನ ಅರ್ಹ ಪಡಿತರದಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಇ) ಈ ಎಲ್ಲ ಅರ್ಹ ಪಡಿತರದಾರರಿಗೂ ಪಡಿತರ ಚೀಟಿ ವಿತರಿಸಲು ಸರ್ಕಾರ ಉದ್ದೇಶಿಸಿದೆಯೇ;

ಈ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):

ಅ) ರಾಜ್ಯದಲ್ಲಿ ಕೈಗೊಂಡಿದ್ದ ಅರ್ಹ ಪಡಿತರ ಚೀಟಿದಾರರ ಸಮೀಕ್ಷಾ ಕಾರ್ಯ ಮುಕ್ತಾಯ ಹಂತದಲ್ಲಿರುತ್ತದೆ.

ಆ) ಸಮೀಕ್ಷಾ ಕಾರ್ಯ ಸಂಪೂರ್ಣವಾಗಿ ಮುಕ್ತಾಯಗೊಂಡ ನಂತರ ಮಾಹಿತಿ ಒದಗಿಸಲಾಗುವುದು.

ಇ) ಎಲ್ಲ ಅರ್ಹರಿಗೂ ಸೂಕ್ತ ಪಡಿತರ ಚೀಟಿಗಳನ್ನು ವಿತರಿಸಲಾಗುವುದು.

ಈ) ಸಮೀಕ್ಷೆ ಕಾರ್ಯ ಮುಕ್ತಾಯಗೊಂಡ ನಂತರ ಅಂದರೆ 15 ಆಗಸ್ಟ್ 2005ರ ನಂತರ ಪಡಿತರ ಚೀಟಿ ವಿತರಿಸಲಾಗುವುದು.